ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಗ್ರಾಮ ಪಂಚಾಯತಿಗಳಲ್ಲಿ ಖಾಸಗಿ/ಸರ್ಕಾರಿ ಸ್ವತ್ತನ್ನು ಅತಿಕ್ರಮಿಸಿಕೊಂಡಿರುವ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) -

35 (30) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಅನೇಕ ಗ್ರಾಮ ಪಂಚಾಯಿತಿಗಳ ಅಧೀನದಲ್ಲಿರುವ ಗ್ರಾಮಗಳಲ್ಲಿ ಸರ್ಕಾರಿ ಜಮೀನುಗಳು/ಸ್ವತ್ತನ್ನು ಖಾಸಗಿಯವರು ಅತಿಕ್ರಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು; (ಜಿಲ್ಲಾವಾರು /ತಾಲ್ಲೂಕುವಾರು/ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಅನೇಕ ಖಾಸಗಿ ಆಸ್ತಿಗಳನ್ನು ಗ್ರಾಮ ಪಂಚಾಯಿತಿಗಳಿಂದ ಒತ್ತುವರಿ ಮಾಡಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ಜಿಲ್ಲಾವಾರು /ತಾಲ್ಲೂಕುವಾರು/ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಇ) ಚಾಮರಾಜನಗರ ತಾಲ್ಲೂಕು, ಹೆಬ್ಬಸೂರು ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ನಿವೇಶನ ಸಂ:124ರ ಸ್ವತ್ತನ್ನು ಗ್ರಾಮ ಪಂಚಾಯಿತಿ ವತಿಯಿಂದ ಅತಿಕ್ರಮಿಸಿಕೊಂಡು ಅಕ್ರಮ ಕಟ್ಟಡ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಇಲ್ಲದ್ದಿದಲ್ಲಿ, ಈಗಾಗಲೇ ಗ್ರಾಮಪಂಚಾಯಿತಿ ನಿವೇಶನ ಸಂ.124 ರ ಸ್ವತ್ತನ್ನು ಗ್ರಾಮ ಪಂಚಾಯಿತಿ ವತಿಯಿಂದ ಅತಿಕ್ರಮಿಸಿಕೊಂಡು ಅಕ್ರಮ ಕಟ್ಟಡ  ನಿರ್ಮಾಣ ಮಾಡಿರುವ ಕುರಿತು ಸರ್ಕಾರಕ್ಕೆ ನಿವೇಶನದ ಮಾಲೀಕರು ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮವನ್ನು ಸ್ಥಳೀಯ ಆಡಳಿತ ಮಾಡದೇ ಇರುವ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು)